೧೧೬೭

ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001
ದಿನಾಂಕ: 19.12.2018

ಸಂಖ್ಯೆ: ಕಾಶಿಇ/ಶೈವಿ/02/ಅಕಾನಿ/2018-19

## ಅಧಿಕೃತ ಜ್ಞಾಪನ

ವಿಷಯ: ವಿಚಾರ ಸಂಕಿರಣ / ಸಮ್ಮೇಳನ / ಸಮಾವೇಶ / ಕಾರ್ಯಗಾರಗಳಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ:ಕಾಶಿಇ/ಶೈವಿ/25/ಸುತ್ತೋಲೆ/2010-11 ದಿನಾಂಕ:22.12.2010.
2. ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ರವರ ಪತ್ರ ಸಂಖ್ಯೆ:ತುವಿ/ಡಿಇವಿ/-02/2018-19/2850 ದಿನಾಂಕ:16.11.2018.

* * * * * * *

ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ಹಾಗೂ ಸಂಶೋಧನಾ ವಿಭಾಗವು ಕರ್ನಾಟಕ ರಾಜ್ಯ ಕಾಲೇಜು ಗ್ರಂಥಪಾಲಕರ ಸಂಘ ಇವರ ಸಹಯೋಗದೊಂದಿಗೆ ದಿನಾಂಕ:01 ಮತ್ತು 02 ಮಾರ್ಚ್ 2019 ರಂದು ವಿಶ್ವವಿದ್ಯಾನಿಲಯದ ಸರ್.ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ **"Library in the Life of the User"** ಎಂಬ ವಿಷಯದ ಕುರಿತು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಏರ್ಪಡಿಸಲಾಗಿದೆ. ಸದರಿ ಸಮ್ಮೇಳನದಲ್ಲಿ ಭಾಗವಹಿಸಲು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಗ್ರಂಥಪಾಲಕರುಗಳಿಗೆ ಉಲ್ಲೇಖ-1 ರ (ಒಂದು ಸೆಮಿಸ್ಟರ್ ಅವಧಿಗೆ 04 ದಿನಗಳಿಗೆ ಮೀರದಂತೆ) ಸುತ್ತೋಲೆಯನ್ವಯ ಅನುಮತಿ ನೀಡಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ಸಂಬಂಧಿಸಿದ ಅಧಿಕಾರಿ/ಪ್ರಾಂಶುಪಾಲರಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರದ/ಇಲಾಖೆಯ ವತಿಯಿಂದ ಯಾವುದೇ ಆರ್ಥಿಕ ಭತ್ಯೆಗಳಿಲ್ಲದೆ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ವಿ.ವಿ. ನಿಯಮಾನುಸಾರ ಕ್ರಮಕ್ಕೆ 26/12

20/12/18

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ:

ಕುಲಸಚಿವರು (ತು.ವಿ)

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಸಲು ಸೂಚಿಸಲಾಗಿದೆ.
2. ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್.ರಸ್ತೆ, ತುಮಕೂರು – 572 103.
3. ಕಛೇರಿ ಪ್ರತಿ.

4847
26/12/18

Scanned by CamScanner